ಈ) ಕ.ರಾ.ರ.ಸಾ. ನಿಗಮದ ಸಾರಿಗೆಗಳಲ್ಲಿ ಈಗಾಗಲೇ ಮಹಿಳೆಯರಿಗೆ, ಸ್ವಾತಂತ್ರ್ಯ ಹೋರಾಟಗಾರರಿಗೆ, ಹಿರಿಯ ನಾಗರಿಕರಿಗೆ, ಅಂಧರಿಗೆ ಹಾಗೂ ಅಂಗವಿಕಲರಿಗೆ ಆಸನಗಳನ್ನು ಮೀಸಲಿರಿಸಲಾಗಿದೆ. ಸಾಮಾನ್ಯ ಹಾಗೂ ವೇಗದೂತ ಸಾರಿಗೆಗಳಲ್ಲಿ ಹಿರಿಯ ನಾಗರಿಕರಿಗೆ ಈಗಾಗಲೇ ಮೀಸಲಿರಿಸಿರುವ 2 ಆಸನಗಳಿಂದ 4 ಆಸನಗಳಿಗೆ ಹೆಚ್ಚಿಸುವುದು ಕಷ್ಟಸಾಧ್ಯವಾಗಿರುತ್ತದೆ.

ಆಂಬ್ಯುಲೆನ್ಸ್‌ಗಳನ್ನು ಒದಗಿಸಿರುವುದು

882 (1473) ಶ್ರೀ ಕೃಷ್ಣಭೈರೇಗೌಡ ಸಿ.ಬಿ. (ಬ್ಯಾಟರಾಯನಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆರೋಗ್ಯ ಕವಚ ಕಾರ್ಯಕ್ರಮದಡಿಯಲ್ಲಿ ಕರ್ನಾಟಕದಾದ್ಯಂತ ಎಷ್ಟು ಆಂಬುಲೆನ್ಸ್‌ಗಳನ್ನು ಒದಗಿಸಲಾಗಿದೆ, ಈ ಆಂಬುಲೆನ್ಸ್‌ಗಳ ಖರೀದಿಗಾಗಿ ರಾಜ್ಯ ಸರ್ಕಾರವು ಎಷ್ಟು ಹಣ ಖರ್ಚು ಮಾಡಿದೆ;

ಆ) ಈ ಆಂಬುಲೆನ್ಸ್‌ಗಳ ಖರೀದಿಗೆ ಹಣಕಾಸನ್ನು ಯಾವ ಯಾವ ಮೂಲಗಳಿಂದ/ಯೋಜನೆಗಳಡಿಯಲ್ಲಿ ಒದಗಿಸಲಾಗಿದೆ (ವಿವರ ನೀಡುವುದು);

ಇ) ಕೇಂದ್ರ ಸರ್ಕಾರದಿಂದ ಬಂದಂತಹ ಅನುದಾನವನ್ನು ಈ ಉದ್ದೇಶದ ಆಂಬುಲೆನ್ಸ್ ಸಲುವಾಗಿ ಉಪಯೋಗಿಸಲಾಗಿದೆಯೇ;

ಇ) ಪಾರದರ್ಶಕತೆ ಮತ್ತು ಜವಾಬ್ದಾರಿತನ (Transparency and accountability) ಕೇಂದ್ರ ಸರ್ಕಾರದ ಕೊಡುಗೆಯನ್ನು ಬಿತ್ತರಿಸುವ ಮುಖಾಂತರ ಸಾರ್ವಜನಿಕರ ಗಮನಕ್ಕೆ ತರಲು ಕ್ರಮ ಕೈಗೊಳ್ಳಲಾಗುವುದೇ;

ಉ) ಕೇಂದ್ರ ಸರ್ಕಾರದ ಅನುದಾನ ಉಪಯೋಗಿಸಿ (ಆಂಬುಲೆನ್ಸ್) ಗಳನ್ನು ಖರೀದಿಸಿದ್ದಲ್ಲಿ, ಈಗಾಗಲೇ (ಆಂಬುಲೆನ್ಸ್)ಗಳ ಮೇಲೆ ಮಾನ್ಯ ಮುಖ್ಯಮಂತ್ರಿ ಹಾಗೂ ಆರೋಗ್ಯ ಸಚಿವರ ಜೊತೆಗೆ ಭಾರತದ ಮಾನ್ಯ ಪ್ರಧಾನ ಮಂತ್ರಿಯವರ ಹಾಗೂ ಕೇಂದ್ರ ಆರೋಗ್ಯ ಸಚಿವರ ಭಾವಚಿತ್ರ ಗಳನ್ನು (ಶಿಷ್ಟಾಚಾರ) ಪ್ರಕಾರ ಅಳವಡಿಸುವುದು ಸೂಕ್ತವಲ್ಲವೇ;

ಊ) ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಈ ಲೋಪವನ್ನು ಸರಿಪಡಿಸಲಾಗುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮತ್ತು ಆ) ಆರೋಗ್ಯ ಕವಚ ಕಾರ್ಯಕ್ರಮದಡಿಯಲ್ಲಿ ಕರ್ನಾಟಕದಾದ್ಯಂತ 517 ಆಂಬ್ಯುಲೆನ್ಸ್‌ಗಳನ್ನು ಒದಗಿಸಲಾಗಿದೆ.

ಈ ಯೋಜನೆಗಾಗಿ ರಾಜ್ಯ ಸರ್ಕಾರದ ಆಯವ್ಯಯದಿಂದ ಇದುವರೆಗೆ (ಫೆಬ್ರವರಿ 2010 ರ ಅಂತ್ಯದವರೆಗೆ) ಒಟ್ಟು ರೂ. 20 ಕೋಟಿಗಳು, 12 ನೇ ಹಣಕಾಸು ಆಯೋಗದಿಂದ ಹಂಚಿಕೆಯಾದ ರಾಜ್ಯದ ಪಾಲು ರೂ. 86.25 ಕೋಟಿಗಳು ಮತ್ತು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ವತಿಯಿಂದ ರೂ.6.25 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ.

ಇ) ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದಿಂದ ಇದುವರೆಗೆ ರೂ. 6.25 ಕೋಟಿಗಳನ್ನು (ಫೆಬ್ರವರಿ 2010ರ ಅಂತ್ಯದವರೆಗೆ) ಉಪಯೋಗಿಸಿಕೊಳ್ಳಲಾಗಿದೆ.

ಈ) ಮತ್ತು ಉ) ಆರೋಗ್ಯ ಕವಚ ಯೋಜನೆಯು ರಾಜ್ಯ ಸರ್ಕಾರವು ರೂಪಿಸಿರುವ ಯೋಜನೆಯಾಗಿದ್ದು, ಕರ್ನಾಟಕ ಪಾರದರ್ಶಕತೆ ಅಧಿನಿಯಮ ಮತ್ತು ಅದರಡಿ ರಚಿತವಾದ ನಿಯಮಗಳನ್ನು ಅನುಸರಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಇದು ರಾಜ್ಯ ಸರ್ಕಾರದ ಯೋಜನೆಯಾಗಿರುವ ಹಿನ್ನೆಲೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರ ಹಾಗೂ ಮಾನ್ಯ ಆರೋಗ್ಯ ಸಚಿವರ ಭಾವಚಿತ್ರವನ್ನು ಆಂಬ್ಯುಲೆನ್ಸ್‌ಗಳ ಮೇಲೆ ಪ್ರದರ್ಶಿಸಲಾಗುತ್ತಿದೆ. ಇಲ್ಲಿ ಶಿಷ್ಟಾಚಾರದ ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ಉಪ್ಪಾರ ಜಾತಿಯನ್ನು ಪರಿಶಿಷ್ಟ ಜಾತಿಗೆ ಸೇರಿಸುವುದು

883 (153) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕದಲ್ಲಿ ಒಟ್ಟು ಉಪ್ಪಾರ ಸಮಾಜದ ಜನಸಂಖ್ಯೆ ಎಷ್ಟು;

ಆ) ಅವರು ಆಧರಿಸುವ ಪ್ರಧಾನ ಉದ್ಯೋಗ ಯಾವುವು;

ಇ) ಉಪ್ಪಾರ ಸಮಾಜವನ್ನು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡವೆಂದು ಗುರುತಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ;